ಕಾರ್ಯ ಮುಂದುವರೆಯುತ್ತದೆ ಎಂದು ಹೇಳುವುದನ್ನು ಒಳಗೊಂಡಂತೆ ಇವಿಷ್ಟು ವಿಷಯವಾಗಿದೆ.

ಅಧ್ಯಕ್ಷರು : ಈಗ ಸಭೆಯ ಮುಂದಿಡಲಾದ ಕಾಗದ ಪತ್ರಗಳು.

3. ಸಭೆಯ ಮುಂದಿಡಲಾದ ಕಾಗದ ಪತ್ರಗಳು :

1) ಶ್ರೀ ಬಿ.ಎಸ್. ಯಡಿಯೂರಪ್ಪ, ಮಾನ್ಯ ಮುಖ್ಯಮಂತ್ರಿಗಳು, ಮಾನ್ಯ ಅಧ್ಯಕ್ಷರೇ,

1978ರ ಕರ್ನಾಟಕ ರಾಜ್ಯ ನಾಗರೀಕ ಸೇವಾ ಅಧಿನಿಯಮ ಕಲಂ 8(3)ರ ಮೇರೆಗೆ:

1. 1963ರ ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮಾವಳಿಗಳ ನಿಯಮ 3,4,8,14 ಹಾಗೂ 23ರ ತಿದ್ದುಪಡಿ ಹಾಗೂ ಅನುಸೂಚಿ II ಮತ್ತು IIIನ್ನು ಬಿಡುವ ಬಗ್ಗೆ ದಿನಾಂಕ 24.10.2009ರಂದು ಹೊರಡಿಸಲಾದ ಡಿಪಿಎಆರ್/2/ಎಸ್ಎಂಆರ್/2008ನೇ ಸಂಖ್ಯೆಯ ಅಧಿಸೂಚನೆ.

2. 1977ರ ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಾವಳಿಗಳ ನಿಯಮ 15ಕ್ಕೆ ತಿದ್ದುಪಡಿ ಮಾಡಿ ದಿನಾಂಕ 20.01.2010ರಂದು ಹೊರಡಿಸಲಾದ ಡಿಪಿಎಆರ್/48/ಎಸ್ಆರ್ಆರ್/ 2009ನೇ ಸಂಖ್ಯೆಯ ಅಧಿಸೂಚನೆಗಳನ್ನು ಮಂಡಿಸುತ್ತೇನೆ.

1984ರ ಕರ್ನಾಟಕ ಲೋಕಾಯುಕ್ತ ಅಧಿನಿಯಮ ಕಲಂ 23(3)ರ ಮೇರೆಗೆ:

1985ರ ಕರ್ನಾಟಕ ಲೋಕಾಯುಕ್ತ ನಿಯಮಾವಳಿಗಳ ನಮೂನೆ IV ನ್ನು ಬದಲಾಯಿಸಿರುವ ಬಗ್ಗೆ ದಿನಾಂಕ 25.01.2010ರಂದು ಹೊರಡಿಸಲಾದ ಸಿಆಸುಇ/18/ಸೇಲೋಯು/2008ನೇ ಸಂಖ್ಯೆಯ ಅಧಿಸೂಚನೆಯನ್ನು ಮಂಡಿಸುತ್ತೇನೆ.

1978ರ ಕರ್ನಾಟಕ ರಾಜ್ಯ ನಾಗರೀಕ ಸೇವಾ ಅಧಿನಿಯಮ 8(3)ರ ಪ್ರಕರಣದ ಮೇರೆಗೆ:

1978ರ ಕರ್ನಾಟಕ ನಾಗರೀಕ ಸೇವಾ ನಿಯಮಗಳ ಪರಿಶಿಷ್ಟ–1 (ಅಪೆಂಡಿಕ್ಸ್–1)ಕ್ಕೆ ತಿದ್ದುಪಡಿ ಮಾಡಿ ದಿನಾಂಕ 23.12.2008ರಂದು

ಹೊರಡಿಸಲಾದ ಎಫ್‌ಡಿ / 7 / ಎಸ್‌ಆರ್‌ಎ / 2008ನೇ ಸಂಖ್ಯೆಯ ಅಧಿಸೂಚನೆಯನ್ನು ಮಂಡಿಸುತ್ತೇನೆ.

2003ರ ಕರ್ನಾಟಕ ಮೌಲ್ಯವರ್ಧಿತ ತೆರಿಗೆ ಅಧಿನಿಯಮದ ಕಲಂ 89ರ ಮೇರೆಗೆ:

1. 2003ರ ಕರ್ನಾಟಕ ಮೌಲ್ಯವರ್ಧಿತ ತೆರಿಗೆ ಅಧಿನಿಯಮದಡಿಯಲ್ಲಿ ಕರ್ನಾಟಕ ಸರ್ಕಾರವು ದಿನಾಂಕ 01.04.2007ರಿಂದ ಜಾರಿಗೆ ಬರುವಂತೆ ಕೆಲವು ಸ್ಪಷ್ಟೀಕರಣವನ್ನು ಸೂಚಿಸಿ ದಿನಾಂಕ 17.12.2009ರಂದು ಹೊರಡಿಸಲಾದ ಎಫ್‌ಡಿ/137/ಸಿಎಸ್‌ಎಲ್/2008ನೇ ಸಂಖ್ಯೆಯ ಅಧಿಸೂಚನೆ.

2. 2003ರ ಕರ್ನಾಟಕ ಮೌಲ್ಯವರ್ಧಿತ ತೆರಿಗೆ ಅಧಿನಿಯಮದಡಿಯಲ್ಲಿ ಕರ್ನಾಟಕ ಸರ್ಕಾರವು ಈ ಮೂಲಕ ಅಧಿಸೂಚಿಸುವುದೇನೆಂದರೆ, ಈ ಕೂಡಲೇ ಜಾರಿಗೆ ಬರುವಂತೆ ಕೇಂದ್ರ ಅಬಕಾರಿ ಸುಂಕ ಅಧಿನಿಯಮ 1985 (1986ರ ಕೇಂದ್ರ ಅಧಿನಿಯಮ 5)ರ ಅಡಿಯಲ್ಲಿ ಉಪಶೀರ್ಷಿಕೆ ಸಂಖ್ಯೆ 8474ನ್ನು ಹೊಂದಿರುವ ವರ್ಟಿಕಲ್ ಪ್ಲಾನೇಟರಿ ಮಿಕ್ಸರ್ ಸದರಿ ನಮೂದಿನ ಉದ್ದೇಶಕ್ಕಾಗಿ ಬಂಡವಾಳ ಸರಕುಗಳ ಸಂಬಂಧದಲ್ಲಿ ದಿನಾಂಕ 29.12.2009ರಂದು ಹೊರಡಿಸಲಾದ ಎಫ್‌ಡಿ/277/ ಸಿಎಸ್‌ಎಲ್/2009ನೇ ಸಂಖ್ಯೆಯ ಅಧಿಸೂಚನೆಗಳನ್ನು ಮಂಡಿಸುತ್ತೇನೆ.

1999ರ ಕರ್ನಾಟಕ ವಿದ್ಯುಚ್ಛಕ್ತಿ ಸುಧಾರಣೆ ಅಧಿನಿಯಮ ಕಲಂ 57(3)ರ ಮೇರೆಗೆ:

2000ದ ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗದ (ಅಧ್ಯಕ್ಷರು ಮತ್ತು ಇತರೆ ಸದಸ್ಯರುಗಳ ಪರಿಶ್ರಮ ಧನ, ಭತ್ಯೆ ಹಾಗೂ ಸೇವಾ ಷರತ್ತುಗಳು) ನಿಯಮಾವಳಿಗಳ ನಿಯಮ 3 ಹಾಗೂ 6ಕ್ಕೆ ತಿದ್ದುಪಡಿ ಮಾಡಿ ದಿನಾಂಕ 08.09.2009ರಂದು ಹೊರಡಿಸಲಾದ ಇಎನ್/25/ ಪಿಎಸ್‌ಆರ್/ 2009ನೇ ಸಂಖ್ಯೆಯ ಅಧಿಸೂಚನೆಯನ್ನು ಮಂಡಿಸುತ್ತೇನೆ.

2. ಶ್ರೀ ಜಿ. ಕರುಣಾಕರ ರೆಡ್ಡಿ, (ಕಂದಾಯ) ಸಚಿವರು, ಮಾನ್ಯ ಅಧ್ಯಕ್ಷರೇ, 1976ರ ಕರ್ನಾಟಕ ಅಭಿವೃದ್ಧಿ ಮಂಡಳಿ ಕಾಯ್ದೆಯ 69(5)ರ ಮೇರೆಗೆ:

1. 1978ರ ಕರ್ನಾಟಕ ಅಭಿವೃದ್ಧಿ ಮಂಡಳಿ ಅಧಿನಿಯಮದಡಿಯಲ್ಲಿ ಕರ್ನಾಟಕ ಸರ್ಕಾರವು ನಿಯಮಗಳನ್ನು ರಚಿಸಿ ದಿನಾಂಕ 16.05.1994ರಂದು ಹೊರಡಿಸಲಾದ ಹೆಚ್‌ಯುಡಿ/786/ಎಂಐಬಿ/93ನೇ ಸಂಖ್ಯೆಯ ಅಧಿಸೂಚನೆ.

2. 1976ರ ಕರ್ನಾಟಕ ಅಭಿವೃದ್ಧಿ ಮಂಡಳಿ ಅಧಿನಿಯಮದಡಿಯಲ್ಲಿ ಕರ್ನಾಟಕ ಸರ್ಕಾರವು ನಿಯಮಗಳನ್ನು ರಚಿಸಿ ದಿನಾಂಕ 16.05.1994ರಂದು ಹೊರಡಿಸಲಾದ ವನಇ/72/ಎಂಎನ್‌ಎಲ್/94ನೇ ಸಂಖ್ಯೆಯ ಅಧಿಸೂಚನೆ.

3. 1976ರ ಕರ್ನಾಟಕ ಅಭಿವೃದ್ಧಿ ಮಂಡಳಿ ಅಧಿನಿಯಮದಡಿಯಲ್ಲಿ (1978ರ ಕರ್ನಾಟಕ ಅಧಿನಿಯಮ–II) ಕರ್ನಾಟಕ ಸರ್ಕಾರವು ನಿಯಮಗಳನ್ನು ರಚಿಸಿ ದಿನಾಂಕ 03.09.2004ರಂದು ಹೊರಡಿಸಲಾದ ಆರ್‌ಡಿ/116/ಆರ್‌ಇಹೆಚ್/2003ನೇ ಸಂಖ್ಯೆಯ ಅಧಿಸೂಚನೆ.

4. 1976ರ ಕರ್ನಾಟಕ ಅಭಿವೃದ್ಧಿ ಮಂಡಳಿ ಅಧಿನಿಯಮದಡಿಯಲ್ಲಿ (1978ರ ಕರ್ನಾಟಕ ಅಧಿನಿಯಮ–II) ಕರ್ನಾಟಕ ಸರ್ಕಾರವು ನಿಯಮಗಳನ್ನು ರಚಿಸಿ ದಿನಾಂಕ 03.09.2004ರಂದು ಹೊರಡಿಸಲಾದ ಆರ್‌ಡಿ/145/ಇಹೆಚ್/2003ನೇ ಸಂಖ್ಯೆಯ ಅಧಿಸೂಚನೆ.

5. 1976ರ ಕರ್ನಾಟಕ ಅಭಿವೃದ್ಧಿ ಮಂಡಳಿ ಅಧಿನಿಯಮದಡಿಯಲ್ಲಿ ಕರ್ನಾಟಕ ಸರ್ಕಾರವು ನಿಯಮ 2ನ್ನು ತಿದ್ದುಪಡಿ ಮಾಡಿ ಹಾಗೂ ನಿಯಮ 4ನ್ನು ಬದಲಾಯಿಸಿ ದಿನಾಂಕ 22.11.2006ರಂದು ಹೊರಡಿಸಲಾದ ಆರ್‌ಡಿ/247/ಆರ್‌ಇಹೆಚ್/2005ನೇ ಸಂಖ್ಯೆಯ ಅಧಿಸೂಚನೆಗಳನ್ನು ಮಂಡಿಸುತ್ತೇನೆ.

1994ರ ಕೂಡಲ ಸಂಗಮ ಅಭಿವೃದ್ಧಿ ಮಂಡಳಿ ಕಾಯ್ದೆಯ ಕಲಂ 37(2)ರ ಮೇರೆಗೆ:

1994ರ ಕೂಡಲ ಸಂಗಮ ಅಭಿವೃದ್ಧಿ ಮಂಡಳಿಯ ಅಧಿನಿಯಮದಡಿಯಲ್ಲಿ (1994ರ ಕರ್ನಾಟಕ ಅಧಿನಿಯಮ 37) ಕರ್ನಾಟಕ ಸರ್ಕಾರವು ನಿಯಮಗಳನ್ನು ರಚಿಸಿ ದಿನಾಂಕ 20.08.1998ರಂದು

ಹೊರಡಿಸಲಾದ ಆರ್‌ಡಿ/191/ಆರ್‌ಇಹೆಚ್/94ನೇ ಸಂಖ್ಯೆಯ ಅಧಿಸೂಚನೆಯನ್ನು ಮಂಡಿಸುತ್ತೇನೆ.

3. ಶ್ರೀ ಪಿ.ಎಂ.ನರೇಂದ್ರಸ್ವಾಮಿ (ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ) ಸಚಿವರು, ಮಾನ್ಯ ಅಧ್ಯಕ್ಷರೇ,

2000 ರ ಬಾಲನ್ಯಾಯ ಕಾಯಿದೆ (ಸೆಂಟ್ರಲ್ ಆಕ್ಟ್ 56:2000) ಮಕ್ಕಳ ರಕ್ಷಣೆ ಹಾಗೂ ಪೋಷಣೆ) ಮತ್ತು 2002ರ ಕರ್ನಾಟಕ ರಾಜ್ಯ ಬಾಲನ್ಯಾಯ (ಮಕ್ಕಳ ರಕ್ಷಣೆ ಹಾಗೂ ಪೋಷಣೆ) ಕಲಂ 68(3)ರ ಮೇರೆಗೆ:

2000ದ ಬಾಲನ್ಯಾಯ ಕಾಯಿದೆ (ಸೆಂಟ್ರಲ್ ಆಕ್ಟ್) (ಮಕ್ಕಳ ರಕ್ಷಣೆ ಹಾಗೂ ಪೋಷಣೆ) ಹಾಗೂ ಕರ್ನಾಟಕ ರಾಜ್ಯ ಬಾಲ ನ್ಯಾಯ (ಮಕ್ಕಳ ರಕ್ಷಣೆ ಹಾಗೂ ಪೋಷಣೆ) ನಿಯಮಾವಳಿಗಳ ರೀತ್ಯಾ ಕೆಲವು ಷರತ್ತಿನೊಂದಿಗೆ 27 ಜಿಲ್ಲೆಗಳ ಒಟ್ಟು 28 ಮಕ್ಕಳ ಕಲ್ಯಾಣ ಸಮಿತಿಗಳಿಗೆ ಅಧ್ಯಕ್ಷರು ಹಾಗೂ ಸದಸ್ಯರುಗಳನ್ನು ನಾಮನಿರ್ದೇಶನ ಮಾಡಿರುವ ಬಗ್ಗೆ ದಿನಾಂಕ 26.02.2007ರಂದು ಹೊರಡಿಸಲಾದ ಮಮಇ/3/ಮಭಾಭ/07ನೇ ಸಂಖ್ಯೆಯ ಅಧಿಸೂಚನೆಯನ್ನು ಮಂಡಿಸುತ್ತೇನೆ.

ಶ್ರೀ ಎಸ್. ಸುರೇಶ್‌ಕುಮಾರ್ (ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಮತ್ತು ನಗರಾಭಿವೃದ್ಧಿ ಸಚಿವರು), ಮಾನ್ಯ ಅಧ್ಯಕ್ಷರೇ, ಸಹಕಾರ ಸಚಿವರ ಪರವಾಗಿ –

1959ರ ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ 130ರ ಪ್ರಕರಣದ ಮೇರೆಗೆ:

1960ರ ಕರ್ನಾಟಕ ಸಹಕಾರ ಸಂಘಗಳ ನಿಯಮಾವಳಿಗಳ ನಿಯಮ 14ಡಿ, 23, 26, 27, 29ಗಳಿಗೆ ತಿದ್ದುಪಡಿ ಮಾಡಿ ನಿಯಮ 21ಎ ಹಾಗೂ 25ನ್ನು ಬಿಟ್ಟು ತತ್ಸಂಬಂಧವಾಗಿ ದಿನಾಂಕ 15.12.2009ರಂದು ಹೊರಡಿಸಲಾದ ಸಿಒ/200/ಸಿಎಲ್‌ಎಂ/2009ನೇ ಸಂಖ್ಯೆಯ ಅಧಿಸೂಚನೆಯನ್ನು ಮಂಡಿಸುತ್ತೇನೆ.

ಅಧ್ಯಕ್ಷರು : ಮಂಡಿಸಲಾಯಿತು.

4. ಶ್ರೀ ಬಿ.ಎಸ್.ಯಡಿಯೂರಪ್ಪ (ಮುಖ್ಯಮಂತ್ರಿಗಳು) ಮಾನ್ಯ ಅಧ್ಯಕ್ಷರೆ, 1956ರ ಕಂಪನಿಗಳ ಅಧಿನಿಯಮದ 619 (ಎ) ಪ್ರಕರಣದ ಮೇರೆಗೆ:

1. ಕರ್ನಾಟಕ ಮೂಲ ಸೌಕರ್ಯ ಅಭಿವೃದ್ಧಿ ಮತ್ತು ಹಣಕಾಸು ಸಂಸ್ಥೆಯ 2008–09ನೇ ಸಾಲಿನ ವಾರ್ಷಿಕ ವರದಿ ಹಾಗೂ ಲೆಕ್ಕಪರಿಶೋಧನಾ ವರದಿ.
2. ಬೆಂಗಳೂರು ಮೆಟ್ರೋ ರೈಲು ನಿಗಮ ನಿಯಮಿತದ 2008–09ನೇ ಸಾಲಿನ ವಾರ್ಷಿಕ ವರದಿ ಹಾಗೂ ಲೆಕ್ಕಪರಿಶೋಧನಾ ವರದಿ.
3. ಕರ್ನಾಟಕ ಪಾನೀಯ ನಿಗಮದ 2008–09ನೇ ಸಾಲಿನ ವಾರ್ಷಿಕ ವರದಿ.
4. ಕರ್ನಾಟಕ ವಿದ್ಯುತ್ ನಿಗಮ ನಿಯಮಿತದ 2007–08ನೇ ಸಾಲಿನ ವಾರ್ಷಿಕ ಲೆಕ್ಕಪರಿಶೋಧನಾ ವರದಿ.
5. ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿ ನಿಯಮಿತದ 2008–09ನೇ ಸಾಲಿನ ವಾರ್ಷಿಕ ವರದಿ.
6. ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ ನಿಯಮಿತದ 2008–09ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿ.
7. ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತದ 2008–09ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿ.
8. ಕರ್ನಾಟಕ ಪಲ್ಪ್‌ವುಡ್ ನಿಯಮಿತದ 2008–09ನೇ ಸಾಲಿನ ವಾರ್ಷಿಕ ವರದಿ.
9. ಕರ್ನಾಟಕ ರಾಜ್ಯ ಅರಣ್ಯ ಕೈಗಾರಿಕೆ ನಿಗಮ ನಿಯಮಿತದ 2008–09ನೇ ಸಾಲಿನ ವಾರ್ಷಿಕ ವರದಿ.
10. ಹಟ್ಟಿ ಚಿನ್ನದ ಗಣಿ ಕಂಪನಿ ನಿಯಮಿತದ 2008–09ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿಯನ್ನು ಮಂಡಿಸುತ್ತೇನೆ.

5) ಶ್ರೀ ಎಸ್. ಸುರೇಶ್‌ಕುಮಾರ್ (ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ ಸಂಸದೀಯ ವ್ಯವಹಾರಗಳ ಮತ್ತು ಶಾಸನ ರಚನೆ ಮತ್ತು ನಗರಾಭಿವೃದ್ಧಿ ಸಚಿವರು) ಮಾನ್ಯ ಅಧ್ಯಕ್ಷರೆ,

1987ರ ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರ ಅಧಿನಿಯಮದ 48 ಮತ್ತು 49ನೇ ಪ್ರಕರಣಗಳ ಮೇರೆಗೆ:

1. ಕೆ.ಜಿ.ಎಫ್. ನಗರಾಭಿವೃದ್ಧಿ ಪ್ರಾಧಿಕಾರದ 2008–09ನೇ ಸಾಲಿನ ಲೆಕ್ಕಪರಿಶೋಧನಾ ವರದಿ.
2. ರಾಮನಗರ–ಚನ್ನಪಟ್ಟಣ ನಗರಾಭಿವೃದ್ಧಿ ಪ್ರಾಧಿಕಾರದ 2008–09ನೇ ಸಾಲಿನ ಲೆಕ್ಕಪರಿಶೋಧನಾ ವರದಿ.
3. ಹಾವೇರಿ ನಗರಾಭಿವೃದ್ಧಿ ಪ್ರಾಧಿಕಾರದ 2008–09ನೇ ಸಾಲಿನ ವಾರ್ಷಿಕ ವರದಿಯನ್ನು ಮಂಡಿಸುತ್ತೇನೆ.

6) ಶ್ರೀ ಎಸ್. ಸುರೇಶ್‌ಕುಮಾರ್ (ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಮತ್ತು ನಗರಾಭಿವೃದ್ಧಿ ಸಚಿವರು) : ಮಾನ್ಯ ಅಧ್ಯಕ್ಷರೆ,

ಶ್ರೀ ಜಗದೀಶ್ ಶೆಟ್ಟರ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಮತ್ತು ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಸಚಿವರು) ಅವರ ಪರವಾಗಿ :

1993ರ ಕರ್ನಾಟಕ ಪಂಚಾಯತ್‌ರಾಜ್ ಅಧಿನಿಯಮದ 262 (3)ನೇ ಮತ್ತು 300(5)ನೇ ಪ್ರಕರಣದ ಮೇರೆಗೆ:

1. ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯತ್‌ನ 2008–09ನೇ ಸಾಲಿನ ವಾರ್ಷಿಕ ಆಡಳಿತ ವರದಿ.
2. ಶಿವಮೊಗ್ಗ ಜಿಲ್ಲಾ ಪಂಚಾಯತ್‌ನ 2008–09ನೇ ಸಾಲಿನ ವಾರ್ಷಿಕ ಆಡಳಿತ ವರದಿ.
3. ಮಂಡ್ಯ ಜಿಲ್ಲಾ ಪಂಚಾಯತ್‌ನ 2007–08ನೇ ಸಾಲಿನ ವಾರ್ಷಿಕ ಲೆಕ್ಕಪತ್ರಗಳ ವರದಿ ಮತ್ತು ಲೆಕ್ಕಪರಿಶೋಧನಾ ವರದಿ.

4. ಬಿಜಾಪುರ ಜಿಲ್ಲಾ ಪಂಚಾಯತ್‌ನ 2008–09ನೇ ಸಾಲಿನ ವಾರ್ಷಿಕ ಆಡಳಿತ ವರದಿ.
5. ಉತ್ತರ ಕನ್ನಡ ಜಿಲ್ಲಾ ಪಂಚಾಯತ್‌ನ 2008–09ನೇ ಸಾಲಿನ ವಾರ್ಷಿಕ ಆಡಳಿತ ವರದಿ.
6. ಬೀದರ್ ಜಿಲ್ಲಾ ಪಂಚಾಯತ್‌ನ 2007–08ನೇ ಸಾಲಿನ ವಾರ್ಷಿಕ ಲೆಕ್ಕಪತ್ರಗಳ ವರದಿ.
7. ಉಡುಪಿ ಜಿಲ್ಲಾ ಪಂಚಾಯತ್‌ನ 2007–08ನೇ ಸಾಲಿನ ವಾರ್ಷಿಕ ಲೆಕ್ಕಪತ್ರಗಳ ವರದಿ ಮತ್ತು ಲೆಕ್ಕಪರಿಶೋಧನಾ ವರದಿ.
8. ಚಿತ್ರದುರ್ಗ ಜಿಲ್ಲಾ ಪಂಚಾಯತ್‌ನ 2006–07ನೇ ಸಾಲಿನ ವಾರ್ಷಿಕ ಲೆಕ್ಕಪತ್ರಗಳ ವರದಿ ಮತ್ತು ಲೆಕ್ಕಪರಿಶೋಧನಾ ವರದಿ.
9. ರಾಯಚೂರು ಜಿಲ್ಲಾ ಪಂಚಾಯತ್‌ನ 2006–07ನೇ ಸಾಲಿನ ವಾರ್ಷಿಕ ಲೆಕ್ಕಪತ್ರಗಳ ವರದಿ ಮತ್ತು ಲೆಕ್ಕಪರಿಶೋಧನಾ ವರದಿ.
10. ಚಿಕ್ಕಮಗಳೂರು ಜಿಲ್ಲಾ ಪಂಚಾಯತ್‌ನ 2008–09ನೇ ಸಾಲಿನ ವಾರ್ಷಿಕ ಆಡಳಿತ ವರದಿ.

1993ರ ಕರ್ನಾಟಕ ಪಂಚಾಯತ್‌ರಾಜ್ ಅಧಿನಿಯಮದ 253(3)ರ ಮೇರೆಗೆ:

1) ತಾಲ್ಲೂಕು ಪಂಚಾಯಿತಿಗಳ 2005–06ನೇ ಮತ್ತು 2006–07ನೇ ಸಾಲಿನ ವಾರ್ಷಿಕ ಲೆಕ್ಕಪತ್ರಗಳ ಕ್ರೂಢೀಕೃತ ಪ್ರತ್ಯೇಕ ಆಡಿಟ್ ವರದಿಗಳನ್ನು ಮಂಡಿಸುತ್ತೇನೆ.

7) ಶ್ರೀ ಆರ್.ಅಶೋಕ್ (ಸಾರಿಗೆ ಸಚಿವರು) ಮಾನ್ಯ ಅಧ್ಯಕ್ಷರೆ,

1950ರ ರಸ್ತೆ ಸಾರಿಗೆ ಅಧಿನಿಯಮದ (ಕೇಂದ್ರ) ಕಲಂ 35(2)ರ ಹಾಗೂ 33(4)ರ ಪ್ರಕರಣದ ಮೇರೆಗೆ:

1. ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ, ಹುಬ್ಬಳ್ಳಿ ಇದರ 2008–09ನೇ ಸಾಲಿನ ವಾರ್ಷಿಕ ಲೆಕ್ಕಪತ್ರಗಳ ವರದಿ ಹಾಗೂ ಲೆಕ್ಕಪರಿಶೋದಾನಾ ವರದಿ.

2. ಈಶಾನ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ, ಗುಲ್ಬರ್ಗಾ ಇದರ 2008–09ನೇ ಸಾಲಿನ ವಾರ್ಷಿಕ ಆಡಳಿತ ವರದಿಯನ್ನು ಮಂಡಿಸುತ್ತೇನೆ.

8) ಶ್ರೀ ಕಟ್ಟಾ ಸುಬ್ರಹ್ಮಣ್ಯನಾಯ್ಡು (ವಸತಿ, ವಾರ್ತಾ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಬೆಂಗಳೂರು ಜಲಮಂಡಳಿ ಸಚಿವರು) ಮಾನ್ಯ ಅಧ್ಯಕ್ಷರೆ,

1973ರ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಅಧಿನಿಯಮದ ಕಲಂ 42ರ ಮೇರೆಗೆ:

1. ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ 2008–09ನೇ ಸಾಲಿನ ಲೆಕ್ಕಪರಿಶೋಧನಾ ವರದಿಯನ್ನು ಮಂಡಿಸುತ್ತೇನೆ.

9) ಶ್ರೀ ಮುರುಗೇಶ್ ರುದ್ರಪ್ಪ ನಿರಾಣಿ (ಭಾರಿ ಮತ್ತು ಮಧ್ಯಮ ಕೈಗಾರಿಕಾ ಸಚಿವರು) ಮಾನ್ಯ ಅಧ್ಯಕ್ಷರೆ :

1956ರ ಕಂಪನಿ ಅಧಿನಿಯಮದ 619 (ಎ) ಪ್ರಕರಣದ ಮೇರೆಗೆ:

1. ಕರ್ನಾಟಕ ರಾಜ್ಯ ವಿದ್ಯುತ್ ಮಗ್ಗಗಳ ಅಭಿವೃದ್ಧಿ ನಿಗಮದ 2008–09ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿ.
2. ಮೈಸೂರು ಪೇಂಟ್ಸ್ ಮತ್ತು ವಾರ್ನಿಷ್ ನಿಯಮಿತದ 2008–09ನೇ ಸಾಲಿನ ವಾರ್ಷಿಕ ವರದಿ.
3. ಮೈಸೂರು ಕ್ರೋಮ್ ಟ್ಯಾನಿಂಗ್ ಕಂಪನಿ ನಿಯಮಿತದ 2008–09ನೇ ಸಾಲಿನ ವಾರ್ಷಿಕ ವರದಿ.
4. ಮೈಸೂರು ಸೇಲ್ಸ್ ಇಂಟರ್ ನ್ಯಾಷನಲ್ ನಿಯಮಿತದ 2008–09ನೇ ಸಾಲಿನ ವಾರ್ಷಿಕ ವರದಿ.
5. ಮಾರ್ಕೆಟಿಂಗ್ ಕನ್ಸಲ್ಟೆಂಟ್ ಅಂಡ್ ಏಜೆನ್ಸಿ ನಿಯಮಿತದ 2008–09ನೇ ಸಾಲಿನ ವಾರ್ಷಿಕ ವರದಿ.
6. ಕರ್ನಾಟಕ ರಾಜ್ಯ ಕೈಗಾರಿಕಾ ಬಂಡವಾಳ ಮತ್ತು ಅಭಿವೃದ್ಧಿ ನಿಗಮ ನಿಯಮಿತದ 2008–09ನೇ ಸಾಲಿನ ವಾರ್ಷಿಕ ವರದಿ.

7. ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮ ನಿಯಮಿತದ 2007–08 ಮತ್ತು 2008–09ನೇ ಸಾಲಿನ ವಾರ್ಷಿಕ ವರದಿ.
8. ಕರ್ನಾಟಕ ರೇಷ್ಮೆ ಮಾರಾಟ ಮಂಡಳಿ ನಿಯಮಿತದ 2008–09ನೇ ಸಾಲಿನ ವಾರ್ಷಿಕ ವರದಿ.
9. ಕರ್ನಾಟಕ ರೇಷ್ಮೆ ಉದ್ಯಮಗಳ ನಿಗಮ ನಿಯಮಿತದ 2008–09ನೇ ಸಾಲಿನ ವಾರ್ಷಿಕ ವರದಿಗಳನ್ನು ಮಂಡಿಸುತ್ತೇನೆ.

10) ಶ್ರೀ ಎಸ್. ಸುರೇಶ್‌ಕುಮಾರ್ (ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಮತ್ತು ನಗರಾಭಿವೃದ್ಧಿ ಸಚಿವರು) : ಮಾನ್ಯ ಅಧ್ಯಕ್ಷರೆ,

ಶ್ರೀ ಬಸವರಾಜ್ ಬೊಮ್ಮಾಯಿ (ಜಲಸಂಪನ್ಮೂಲ ಸಚಿವರು) ಅವರ ಪರವಾಗಿ: 1980ರ ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರ ಅಧಿನಿಯಮದ ಕಲಂ 24 ಹಾಗೂ 25ರ ಮೇರೆಗೆ:

1. ತುಂಗ ಭದ್ರ ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರದ 2008–09ನೇ ಸಾಲಿನ ವಾರ್ಷಿಕ ವರದಿ.
2. ಕಾವೇರಿ ಜಲಾನಯನ ಯೋಜನೆಗಳ ಪ್ರದೇಶಾಭಿವೃದ್ಧಿ ಪ್ರಾಧಿಕಾರದ 2008–09ನೇ ಸಾಲಿನ ಲೆಕ್ಕಪರಿಶೋಧನಾ ವರದಿಯನ್ನು ಮಂಡಿಸುತ್ತೇನೆ.

11) ಶ್ರೀ ಎಸ್. ಸುರೇಶ್‌ಕುಮಾರ್ (ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಮತ್ತು ನಗರಾಭಿವೃದ್ಧಿ ಸಚಿವರು) : ಮಾನ್ಯ ಅಧ್ಯಕ್ಷರೆ,

ಶ್ರೀ ಅರವಿಂದ ಎಸ್.ಲಿಂಬಾವಳಿ (ಉನ್ನತ ಶಿಕ್ಷಣ ಸಚಿವರು) ಅವರ ಪರವಾಗಿ 1994ರ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ ಅಧಿನಿಯಮದ 25(2)ನೇ ಪ್ರಕರಣದ ಮೇರೆಗೆ:

1. ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ 2008–09ನೇ ಸಾಲಿನ ವಾರ್ಷಿಕ ವರದಿಯನ್ನು ಮಂಡಿಸುತ್ತೇನೆ.

12) ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) ಅವರು:

1966ರ ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ ಅಧಿನಿಯಮದ ಕಲಂ 25(3)ರ ಮೇರೆಗೆ:

1. ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯ 2008–09ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿ.

13) ಶ್ರೀ ಎಸ್. ಸುರೇಶ್‌ಕುಮಾರ್ (ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಮತ್ತು ನಗರಾಭಿವೃದ್ಧಿ ಸಚಿವರು) : ಮಾನ್ಯ ಅಧ್ಯಕ್ಷರೆ,

ಶ್ರೀ ಹೆಚ್.ಹಾಲಪ್ಪ (ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು) ಅವರ ಪರವಾಗಿ

1956ರ ಕಂಪನಿಗಳ ಅಧಿನಿಯಮದ 619 (ಎ) ಪ್ರಕರಣದ ಮೇರೆಗೆ:

1. ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ನಿಯಮಿತದ 2008–09ನೇ ಸಾಲಿನ ವಾರ್ಷಿಕ ವರದಿಯನ್ನು ಮಂಡಿಸುತ್ತೇನೆ.

14) ಶ್ರೀ ಪಿ.ಎಂ.ನರೇಂದ್ರಸ್ವಾಮಿ (ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವರು) ಮಾನ್ಯ ಅಧ್ಯಕ್ಷರೆ,

1956ರ ಕಂಪನಿಗಳ ಅಧಿನಿಯಮದ 619 (ಎ) ಪ್ರಕರಣದ ಮೇರೆಗೆ:

1. ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮ ನಿಯಮಿತದ 2008–09ನೇ ಸಾಲಿನ ವಾರ್ಷಿಕ ಲೆಕ್ಕಪತ್ರಗಳ ವರದಿಯನ್ನು ಮಂಡಿಸುತ್ತೇನೆ.

1995ರ ಕರ್ನಾಟಕ ಮಹಿಳಾ ಆಯೋಗ ಅಧಿನಿಯಮದ 15ರ ಪ್ರಕರಣದ ಮೇರೆಗೆ:

1. ಕರ್ನಾಟಕ ರಾಜ್ಯ ಮಹಿಳಾ ಆಯೋಗದ 2008–09ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿಯನ್ನು ಮಂಡಿಸುತ್ತೇನೆ.

15) ಶ್ರೀ ಎಸ್. ಸುರೇಶ್‌ಕುಮಾರ್ (ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಮತ್ತು ನಗರಾಭಿವೃದ್ಧಿ ಸಚಿವರು) : ಮಾನ್ಯ ಅಧ್ಯಕ್ಷರೆ,

ಶ್ರೀ ರೇವೂನಾಯಕ್ ಬೆಳಮಗಿ (ಪಶುಸಂಗೋಪನೆ ಸಚಿವರು) ಅವರ ಪರವಾಗಿ

1956ರ ಕಂಪನಿಗಳ ಅಧಿನಿಯಮದ 619 (ಎ) ಪ್ರಕರಣದ ಮೇರೆಗೆ:

1. ಕರ್ನಾಟಕ ಮಾಂಸ ಮತ್ತು ಕೋಳಿ ಮಾರಾಟ ನಿಗಮ ನಿಯಮಿತದ 2008–09ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿಯನ್ನು ಮಂಡಿಸುತ್ತೇನೆ.

16) ಶ್ರೀ ಎಸ್. ಸುರೇಶ್‌ಕುಮಾರ್ (ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಮತ್ತು ನಗರಾಭಿವೃದ್ಧಿ ಸಚಿವರು) : ಮಾನ್ಯ ಅಧ್ಯಕ್ಷರೆ,

ಶ್ರೀ ಆನಂದ್ ವಸಂತ್ ಅಸ್ನೋಟಿಕರ್ (ಮೀನುಗಾರಿಕೆ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು) ಅವರ ಪರವಾಗಿ

1956ರ ಕಂಪನಿಗಳ ಅಧಿನಿಯಮದ 619 (ಎ) ಪ್ರಕರಣದ ಮೇರೆಗೆ:

1. ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮ ನಿಯಮಿತದ 2008–09ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿಯನ್ನು ಮಂಡಿಸುತ್ತೇನೆ.

ಅಧ್ಯಕ್ಷರು : ಮಂಡಿಸಲಾಯಿತು.